**Akashvani : Bangalore**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**22.03.2024 / 14.30 hrs**

**ಮುಖ್ಯಾಂಶಗಳು**

**೧. ಇಸ್ರೋದಿಂದ ಪುಷ್ಪಕ್-ಮರುಬಳಕೆ ಬಾಹ್ಯಾಕಾಶ ನೌಕೆಯ ಪರೀಕ್ಷೆ ಯಶಸ್ವಿ**

**೨. ೫, ೮, ೯ ಮತ್ತು ೧೧ನೇ ತರಗತಿಗಳಿಗೆ ಬೋರ್ಡ್ ಪರೀಕ್ಷೆ ನಡೆಸಲು ಸರ್ಕಾರಕ್ಕೆ ಹೈಕೋರ್ಟ್ ಅಸ್ತು**

**೩. ಇಂದು ವಿಶ್ವ ಜಲ ದಿನ; ಶಾಂತಿಗಾಗಿ ಜೀವ ಜಲ ಈ ಬಾರಿಯ ಧ್ಯೇಯ ವಾಕ್ಯ**

**೪. ಲೋಕಸಭಾ ಚುನಾವಣೆ ಹಿನ್ನೆಲೆ; ಚಿಕ್ಕಮಗಳೂರು ಸಂಸದೀಯ ಕ್ಷೇತ್ರದ ಮಾಹಿತಿ**

**೫. ಐಪಿಎಲ್ ಟಿ-೨೦ ಕ್ರಿಕೆಟ್ ಲೀಗ್ ಪಂದ್ಯಾವಳಿ ಇಂದು ಆರಂಭ: ಉದ್ಘಾಟನಾ ಪಂದ್ಯದಲ್ಲಿ ಆರ್‌ಸಿಬಿ-ಸಿಎಸ್‌ಕೆ ಮುಖಾಮುಖಿ**

**<><*<><>*><>**

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ-ಇಸ್ರೋ ಹೊಸದಾಗಿ ಅಭಿವೃದ್ಧಿ ಪಡಿಸಿರುವ ಪುಷ್ಪಕ್‌ನ ಮರುಬಳಕೆಯ ಬಾಹ್ಯಾಕಾಶ ನೌಕೆಯನ್ನು ಇಂದು ಯಶಸ್ವಿಯಾಗಿ ಪರೀಕ್ಷಿಸಲಾಯಿತು. ಚಿತ್ರದುರ್ಗದ ಚಳ್ಳಕೆರೆಯಲ್ಲಿರುವ ಬಾಹ್ಯಾಕಾಶ ನೌಕೆ ಪರೀಕ್ಷಾ ಕೇಂದ್ರದಲ್ಲಿ ಇಸ್ರೋ ಅಧ್ಯಕ್ಷ ಸೋಮನಾಥ್ ನೇತೃತ್ವದಲ್ಲಿ ಈ ಪರೀಕ್ಷೆ ನಡೆಯಿತು. ಪರೀಕ್ಷೆಯ ನಂತರ, ಇಸ್ರೋ ಅಧ್ಯಕ್ಷರು ಬಾಹ್ಯಾಕಾಶ ನೌಕೆಯ ಕುಶಲತೆ, ಲ್ಯಾಂಡಿಂಗ್ ಮತ್ತು ಶಕ್ತಿಯ ನಿರ್ವಹಣೆಯನ್ನು ಸಂಪೂರ್ಣ ಸ್ವಾಯತ್ತ ಕ್ರಮದಲ್ಲಿ ದೋಷರಹಿತವಾಗಿ ಕಾರ್ಯಗತಗೊಳಿಸಿದ್ದಕ್ಕಾಗಿ ತಂಡದ ಸದಸ್ಯರನ್ನು ಅಭಿನಂದಿಸಿದರು.

**<><*<><>*><>**

ರಾಜ್ಯದಲ್ಲಿ ೫, ೮, ೯ ಮತ್ತು ೧೧ನೇ ತರಗತಿ ವಿದ್ಯಾರ್ಥಿಗಳಿಗೆ ಬೋರ್ಡ್ ಪರೀಕ್ಷೆ ನಡೆಸುವ ಕುರಿತಂತೆ ಇಂದು ಕರ್ನಾಟಕ ಉಚ್ಚನ್ಯಾಯಾಲಯದ ವಿಭಾಗೀಯ ಪೀಠ ತೀರ್ಪು ಪ್ರಕಟಿಸಿದೆ. ಈ ತರಗತಿಗಳಿಗೆ ಬೋರ್ಡ್ ಪರೀಕ್ಷೆ ನಡೆಸಬಹುದು ಎಂದು ಸರ್ಕಾರಕ್ಕೆ ಸೂಚಿಸಿದೆ. ಸ್ಥಗಿತಗೊಂಡಿದ್ದ ಪರೀಕ್ಷೆ ಮುಂದುವರೆಸಲು ಹೈಕೋರ್ಟ್ ಆದೇಶ ಹೊರಡಿಸಿದೆ. ನ್ಯಾಯಮೂರ್ತಿ ಕೆ. ಸೋಮಶೇಖರ್, ನ್ಯಾಯಮೂರ್ತಿ ಕೆ. ರಾಜೇಶ್ ರೈ ಅವರು ಇರುವ ಹೈಕೋರ್ಟ್ ವಿಭಾಗೀಯ ಪೀಠ ತೀರ್ಪು ಪ್ರಕಟಿಸಿತು. ಇದಕ್ಕೂ ಮುನ್ನ ಈ ತರಗತಿಗಳಿಗೆ ಬೋರ್ಡ್ ಪರೀಕ್ಷೆ ನಡೆಸುವ ಕುರಿತಂತೆ ರಾಜ್ಯ ಸರ್ಕಾರ ಹೊರಡಿಸಿದ್ದ ಸುತ್ತೋಲೆಯನ್ನು ಹೈಕೋರ್ಟ್‌ನ ಏಕಸದಸ್ಯ ಪೀಠ ರದ್ದುಪಡಿಸಿತ್ತು. ಆ ಆದೇಶಕ್ಕೆ ವಿಭಾಗೀಯ ಪೀಠ ತಡೆ ನೀಡಿತ್ತು. ನಂತರ ವಿಭಾಗೀಯ ಪೀಠದ ಆದೇಶಕ್ಕೆ ಸುಪ್ರೀಂಕೋರ್ಟ್‌ನಿಂದ ತಡೆಯಾಜ್ಞೆ ನೀಡಲಾಗಿತ್ತು. ನ್ಯಾಯಾಲಯದ ಇಂದಿನ ಆದೇಶದೊಂದಿಗೆ ರಾಜ್ಯ ಪಠ್ಯಕ್ರಮದ ೫, ೮,೯ನೇ ತರಗತಿಗಳ ಬೋರ್ಡ್ ಪರೀಕ್ಷೆಗಳ ವಿಚಾರ ಕುರಿತ ಅನಿಶ್ಚಿತತೆ ಬಗೆಹರಿದಂತಾಗಿದೆ. ಈಗಾಗಲೇ ಐದನೇ ತರಗತಿಯ ನಾಲ್ಕು ವಿಷಯಗಳ ಪರೀಕ್ಷೆ ಮುಗಿದಿವೆ. ೮ ಹಾಗೂ ೯ ತರಗತಿಗಳ ಎರಡೆರಡು ವಿಷಯಗಳ ಪರೀಕ್ಷೆ ನಡೆದಿವೆ. ಏಕ ಸದಸ್ಯ ಪೀಠ, ಬೋರ್ಡ್ ಪರೀಕ್ಷೆಗಳನ್ನು ರದ್ದುಗೊಳಿಸುವ ಮೊದಲೇ ೧೧ ನೇ ತರಗತಿಯ ಪರೀಕ್ಷೆಗಳನ್ನು ಮುಕ್ತಾಯಗೊಳಿಸಲಾಗಿತ್ತು. ಹೀಗಾಗಿ, ಆ ತರಗತಿಯ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಪೂರ್ಣಗೊಳಿಸುವಂತೆಯೂ ವಿಭಾಗೀಯ ಪೀಠ ಸೂಚಿಸಿದೆ.

**<><*<><>*><>**

ಅಮೂಲ್ಯ ನೈಸರ್ಗಿಕ ಸಂಪನ್ಮೂಲವಾದ ನೀರಿನ ಮಹತ್ವ ಮತ್ತು ಸಂರಕ್ಷಣೆ ಕುರಿತು ಜಾಗೃತಿ ಮೂಡಿಸುವ ಸಲುವಾಗಿ ವಿಶ್ವ ಜಲ ದಿನವನ್ನು ಇಂದು ಆಚರಿಸಲಾಗುತ್ತಿದೆ. ದೈನಂದಿನ ಚಟುವಟಿಕೆಗಳಿಗೆ ಅತ್ಯಗತ್ಯವಾದ ಜೀವ ಜಲದ ಮೂಲ ಸೆಲೆಯಾದ ಅಂತರ್ಜಲ ಬತ್ತಿಹೋಗುತ್ತಿರುವುದು ಜಗತ್ತಿನೆಲ್ಲೆಡೆ ಪ್ರಸ್ತುತ ಆತಂಕಕ್ಕೆ ಕಾರಣವಾಗಿದ್ದು, ಅಂತರ್ಜಲ ಮಟ್ಟ ನಿರ್ವಹಣೆಗೆ ವಿಶೇಷ ಗಮನ ನೀಡಲಾಗುತ್ತಿದೆ. ಒಂದು ಅಂದಾಜಿನಂತೆ ವಿಶ್ವದಲ್ಲಿ ೨.೨ ಬಿಲಿಯನ್ ಜನರಿಗೆ ಶುದ್ಧ ಕುಡಿಯುವ ನೀರು ದೊರೆಯದಿರುವ ಹಿನ್ನೆಲೆಯಲ್ಲಿ ಎಲ್ಲರಿಗೂ ಶುದ್ಧ ಕುಡಿಯುವ ನೀರು ದೊರೆಯಬೇಕು ಎನ್ನುವುದು ಎಲ್ಲ ಸರ್ಕಾರಗಳ ಆದ್ಯತೆಯ ವಿಷಯವಾಗಿದೆ. ಜನಸಂಖ್ಯೆಯ ಹೆಚ್ಚಳದೊಂದಿಗೆ ಅತಿ ವೇಗವಾಗಿ ಬೆಳೆಯುತ್ತಿರುವ ನಗರಗಳಲ್ಲಿ ನೀರಿನ ಸಮಸ್ಯೆ ತೀವ್ರಗೊಳ್ಳುತ್ತಿದ್ದು, ಈ ಬಾರಿ ಶಾಂತಿಗಾಗಿ ಜೀವ ಜಲ ಎನ್ನುವ ಧ್ಯೇಯ ವಾಕ್ಯದೊಂದಿಗೆ ಈ ದಿನವನ್ನು ಆಚರಿಸಲಾಗುತ್ತಿದೆ. ಪ್ರತಿ ವರ್ಷ ಮಾರ್ಚ್ ೨೨ನೇ ತಾರೀಖನ್ನು ವಿಶ್ವ ಜಲ ದಿನವನ್ನಾಗಿ ಆಚರಿಸಲು ೧೯೯೩ರಲ್ಲಿ ವಿಶ್ವ ಸಂಸ್ಥೆಯ ಮಹಾಸಭೆ ಅವಿರೋಧವಾಗಿ ತೀರ್ಮಾನಿಸಿತ್ತು. ಇದರ ಅಂಗವಾಗಿ ಜಲ ಸಂರಕ್ಷಣೆ ನೀರು ಕಲುಷಿತವಾಗದಂತೆ ರಕ್ಷಿಸುವುದು ಮತ್ತು ಜನ-ಜಾನುವಾರುಗಳ ಆರೋಗ್ಯ ಮತ್ತು ನೈರ್ಮಲ್ಯ ರಕ್ಷಣೆಯಲ್ಲಿ ನೀರಿನ ಮಹತ್ವದ ಬಗ್ಗೆ ಮಾಹಿತಿ ನೀಡುವ ಶೈಕ್ಷಣಿಕ ಕಾರ್ಯಾಗಾರಗಳು, ವಿಶೇಷ ಪ್ರಚಾರ ಆಂದೋಲನಗಳು, ಸಸಿಗಳನ್ನು ನೆಡುವಿಕೆ ಮೊದಲಾದ ಚಟುವಟಿಕೆ ಮೂಲಕ ಜನಜಾಗೃತಿ ಮೂಡಿಸಲಾಗುವುದು. ದಾವಣಗೆರೆಯಲ್ಲಿ ಇಂದು ವಿಶ್ವ ಜಲ ದಿನವನ್ನು ಆಚರಿಸಲಾಯಿತು. ಪ್ರಧಾನ ಜಿಲ್ಲಾ

ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಹೆಗಡೆ ಮಾತನಾಡಿ, ನೀರಿನ ಮೂಲಗಳನ್ನು ಸಂರಕ್ಷಿಸಬೇಕಾದ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ. ಭವಿಷ್ಯದ ಪೀಳಿಗೆಗಾಗಿ ನೀರನ್ನು ಉಳಿಸಬೇಕಾಗಿದೆ. ಮಳೆ ನೀರು ಮರುಪೂರಣದಿಂದ ಅಂತರ್ಜಲದ ಮಟ್ಟ ಸುಧಾರಿಸುವಂತೆ ಎಚ್ಚರವಹಿಸಬೇಕು. ನೀರನ್ನು ಜವಾಬ್ದಾರಿಯಿಂದ ಬಳಸಬೇಕು ಎಂದು ಹೇಳಿದರು. ಚಿತ್ರದುರ್ಗದಲ್ಲಿ ಇಂದು ವಿಶ್ವ ಜಲ ದಿನವನ್ನು ಆಚರಿಸಲಾಯಿತು. ಪ್ರಧಾನ ಜಿಲ್ಲಾ ನ್ಯಾಯಾಧೀಶರಾದ ಗೀತಾ ಕೆ.ಬಿ ಮಾತನಾಡಿ, ನೀರು ಒಂದು ಸಂಪನ್ಮೂಲವಲ್ಲ, ಅದು ಇಡೀ ಜೀವ ಸಂಕುಲದ ಜೀವಾಮೃತ ಜಾಗತಿಕ ಹವಾಮಾನ ಬದಲಾವಣೆಯಿಂದ ಕುಡಿಯುವ ನೀರಿನ ಮೇಲೆ ಪ್ರತಿಕೂಲ ಪರಿಣಾಮವಾಗುತ್ತಿದೆ. ನೀರಿನ ಮಿತ ಬಳಕೆಯ ಬಗ್ಗೆ ಪ್ರತಿಯೊಬ್ಬರಲ್ಲೂ ಅರಿವು ಮೂಡಿಸಬೇಕಾದ ಅಗತ್ಯವಿದೆ ಎಂದರು.

**<><*<><>*><>**

ಈಗ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ವಿವರಗಳು :

ವರದಿಯನ್ನು ಸಿದ್ದಪಡಿಸಿರುವವರು : ನಮ್ಮ ಜಿಲ್ಲಾ ಪ್ರತಿನಿಧಿ, ಚಂದ್ರಶೇಖರ್ ಎನ್.

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ ಒಟ್ಟು ೮ ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಿದ್ದು, ೧೯ ಲಕ್ಷದ ೬೬ ಸಾವಿರದ ೬೭ ಮತದಾರರಿದ್ದಾರೆ. ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರಕ್ಕೆ ಏಪ್ರಿಲ್ ೨೬ ರಂದು ಮತದಾನ ನಡೆಯಲಿದೆ. ಕ್ಷೇತ್ರದ ವ್ಯಾಪ್ತಿಯಲ್ಲಿ ಗೌರಿಬಿದನೂರು, ಬಾಗೇಪಲ್ಲಿ, ಚಿಕ್ಕಬಳ್ಳಾಪುರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ,, ದೇವನಹಳ್ಳಿ, ದೊಡ್ಡಬಳ್ಳಾಪುರ, ನೆಲಮಂಗಲ ಹಾಗೂ ಬೆಂಗಳೂರು ನಗರ ಜಿಲ್ಲೆಯ ಯಲಹಂಕ ವಿಧಾನಸಭಾ ಕ್ಷೇತ್ರಗಳು ಸೇರುತ್ತವೆ. ಸೋಲೂರು ಹೋಬಳಿ ಮಾತ್ರ ರಾಮನಗರ ಜಿಲ್ಲೆ ವ್ಯಾಪ್ತಿಯಲ್ಲಿದೆ. ೨೦೧೯ ರ ಚುನಾವಣೆಯಲ್ಲಿ ಈ ಕ್ಷೇತ್ರದಲ್ಲಿ ಒಟ್ಟು ೧೮ ಲಕ್ಷದ ೦೮ ಸಾವಿರದ ೭೮೦ ನೋಂದಾಯಿತ ಮತದಾರರಿದ್ದರು. ಈ ಬಾರಿಯ ಚುನಾವಣೆಗೆ ಕ್ಷೇತ್ರದಲ್ಲಿ ಒಟ್ಟು ೧೯ ಲಕ್ಷದ ೬೬ ಸಾವಿರದ ೬೭ ಮತದಾರರಿದ್ದು, ಈ ಪೈಕಿ ೯ ಲಕ್ಷದ ೭೬ ಸಾವಿರದ ೪೩೬ ಪುರುಷ ಮತದಾರರು ಮತ್ತು ೯ ಲಕ್ಷದ ೮೯ ಸಾವಿರದ ೩೬೯ ಮಹಿಳಾ ಮತದಾರರು ಹಾಗೂ ೨೬೨ ಇತರೆ ಮತದಾರರಿದ್ದಾರೆ. ಮಾರ್ಚ್ ೨೫ ರವರೆಗೂ ಮತದಾರರ ಪಟ್ಟಿಯಲ್ಲಿ ಹೊಸದಾಗಿ ಹೆಸರು ನೊಂದಾಯಿಸಿಕೊಳ್ಳಲು ಅವಕಾಶವಿದೆ. ೧೮ ಸಾವಿರದ ೮೦೯ ಮತದಾರರು ೮೫ ವರ್ಷಕ್ಕೂ ಹೆಚ್ಚು ವಯಸ್ಸಿನವರಾಗಿದ್ದಾರೆ. ೨೬ ಸಾವಿರದ ೫೫೯ ವಿಶೇಷ ಚೇತನ ಮತದಾರರಿದ್ದಾರೆ. ಕ್ಷೇತ್ರದಲ್ಲಿ ಒಟ್ಟು ೨ ಸಾವಿರದ ೩೨೬ ಮತಗಟ್ಟೆಗಳಿದ್ದು, ಇದರಲ್ಲಿ ೩೮೨ ಸೂಕ್ಷ್ಮ ಮತ್ತು ೪೪ ಅತಿ ಸೂಕ್ಷ್ಮ ಮತಗಟ್ಟೆಗಳಾಗಿವೆ. ಒಟ್ಟು ೩೭ ಚೆಕ್ ಪೋಸ್ಟ್ ಗಳನ್ನು ತೆರೆಯಲಾಗಿದೆ. ೪೨೪ ಸೇವಾ ಮತದಾರರಿದ್ದಾರೆ. ಕ್ಷೇತ್ರದಲ್ಲಿ ಮುಕ್ತ, ಪಾರದರ್ಶಕ ಮತ್ತು ನ್ಯಾಯಸಮ್ಮತ ಚುನಾವಣೆ ನಡೆಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ಕ್ಷೇತ್ರದ ಚುನಾವಣಾಧಿಕಾರಿ ಮಾಹಿತಿ ನೀಡಿದ್ದಾರೆ.

**<><*<><>*><>**

ಲೋಕಸಭೆ ಚುನಾವಣೆಗಾಗಿ ಹಲವು ಜಿಲ್ಲೆಗಳಲ್ಲಿ ನಡೆದಿರುವ ಸಿದ್ಧತೆಗಳ ಬಗ್ಗೆ ಮಾಹಿತಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸ್ವೀಪ್ ಸಮಿತಿ ವತಿಯಿಂದ ಮಂಗಳೂರು ವಿಶ್ವವಿದ್ಯಾಲಯ ಕಾಲೇಜಿನಲ್ಲಿಂದು ಮತದಾನ ಜಾಗೃತಿ ಅಭಿಯಾನವನ್ನು ಆಯೋಜಿಸಲಾಗಿತ್ತು. ಪ್ರತಿಯೊಬ್ಬರು ಮತದಾನ ಮಾಡಬೇಕು ಎಂದು ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಮನವಿ ಮಾಡಿದರು. ಚಿತ್ರದುರ್ಗ ಜಿಲ್ಲೆಯ ವಿವಿಧ ಚೆಕ್‌ಪೋಸ್ಟ್‌ಗಳಲ್ಲಿ ದಾಖಲೆ ಇಲ್ಲದೇ ಸಾಗಿಸುತ್ತಿದ್ದ ೨ ಲಕ್ಷ ೯೦ ಸಾವಿರ ರೂಪಾಯಿ ನಗದು ಹಣ ಮತ್ತು ೪೯ ಲೀಟರ್ ಮದ್ಯ ವಶಪಡಿಸಿಕೊಳ್ಳಲಾಗಿದೆ ಎಂದು ಸಹಾಯಕ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ. ಉತ್ತರಕನ್ನಡ ಜಿಲ್ಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಾದ ೭೮ ಗಂಟೆ ಅವಧಿಯಲ್ಲಿ ಸರ್ಕಾರಿ ಮತ್ತು ಖಾಸಗಿ ಜಾಗಗಳಲ್ಲಿದ್ದ ವಿವಿಧ ಪ್ರಚಾರ ಬೋರ್ಡ್‌ಗಳನ್ನು ತೆರವುಗೊಳಿಸಲಾಗಿದೆ ಎಂದು ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ್ ತಿಳಿಸಿದ್ದಾರೆ. ಗದಗ್ ಜಿಲ್ಲೆಯಲ್ಲಿ ನರಗುಂದ ತಾಲೂಕು ಹುಣಶಿಕಟ್ಟೆ, ಕನಕಿಕೊಪ್ಪ ಹಾಗೂ ಚಿಕ್ಕನರಗುಂದ ಗ್ರಾಮಪಂಚಾಯಿತಿ ವ್ಯಾಪ್ತಿಯ ಮತಗಟ್ಟೆ ಕೇಂದ್ರಗಳಿಗೆ ಇಂದು ನೀತಿ ಸಂಹಿತೆ ನೋಡಲ್ ಅಧಿಕಾರಿ ಸೋಮಶೇಖರ್ ಬಿರಾದಾರ್ ಭೇಟಿ ನೀಡಿ ಪರಿಶೀಲಿಸಿದರು. ಈ ಕೇಂದ್ರಗಳಲ್ಲಿ ಇರುವ ಅಗತ್ಯ ಮೂಲಸೌಕರ್ಯ ವ್ಯವಸ್ಥೆಗಳನ್ನು ಪರಾಮರ್ಶಿಸಲಾಯಿತು.

**<><*<><>*><>**

ಇಂಡಿಯನ್ ಪ್ರೀಮಿಯರ್ ಲೀಗ್ ಟಿ-೨೦ ಕ್ರಿಕೆಟ್ ಟೂರ್ನಿಯ ೧೭ನೇ ಆವೃತ್ತಿ ಚೆನ್ನೈನ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿ ಇಂದು ಆರಂಭಗೊಳ್ಳಲಿದೆ. ಆರಂಭಿಕ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಮತ್ತು ಬೆಂಗಳೂರು ರಾಯಲ್ ಚಾಲೆಂಜರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ಏಪ್ರಿಲ್ ೧೯ ರಿಂದ ಜೂನ್ ೧ರವರೆಗೆ ದೇಶಾದ್ಯಂತ ಸಾರ್ವತ್ರಿಕ ಚುನಾವಣೆ ನಡೆಯುತ್ತಿರುವ ಕಾರಣ, ಐಪಿಎಲ್ ಆಡಳಿತ ಮಂಡಳಿ ಮೊದಲ ಹಂತದಲ್ಲಿ ಕೇವಲ ೨೧ ಪಂದ್ಯಗಳ ವೇಳಾಪಟ್ಟಿಯನ್ನು ಮಾತ್ರ ಘೋಷಿಸಿದೆ. ಮೇ ೨೬ಕ್ಕೆ ಐಪಿಎಲ್ ಫೈನಲ್ ಪಂದ್ಯ ನಿಗದಿಯಾಗಿದೆ. ಲೋಕಸಭಾ ಚುನಾವಣೆಗಾಗಿ ಭದ್ರತೆಗೆ ಹೆಚ್ಚುವರಿ ಸಿಬ್ಬಂದಿ ನಿಯೋಜಿಸಿರುವ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆಯೊಂದಿಗೆ ಸಮಾಲೋಚನೆ ನಡೆಸಿದ ಬಳಿಕ ಸದ್ಯದಲ್ಲೇ ಉಳಿದ ಪಂದ್ಯಗಳನ್ನು ಪ್ರಕಟಿಸುವ ನಿರೀಕ್ಷೆ ಇದೆ.